**Akashvani : Bangalore**
**Regional Bulletin In Kannada**
**05.09.2025 : 14.30hrs**
**ಆಕಾಶವಾಣಿ ಬೆಂಗಳೂರು**
**ಪ್ರದೇಶ ಸಮಾಚಾರ**
**05.09.2025 : 14.30 hrs**
******

**ಮುಖ್ಯಾಂಶಗಳು :**

1. ಪರಿಶಿಷ್ಟರ ಹಾಗೂ ಬುಡಕಟ್ಟು ಜನರ ಶ್ರೇಯೋಭಿವೃದ್ಧಿಗೆ ಕೇಂದ್ರ ಸರ್ಕಾರ ಬದ್ಧ - ಕೇಂದ್ರ ಸಚಿವ ರಾಮದಾಸ್ ಅಠಾವಳೆ
2. ದೇಶಾದ್ಯಂತ ಮುಸ್ಲಿಂ ಬಾಂಧವರಿಂದ ಮಿಲಾದ್ ಉನ್ ನಬಿ ಶ್ರದ್ಧಾ ಭಕ್ತಿಯಿಂದ ಆಚರಣೆ
3. ಇಂದು ದೇಶಾದ್ಯಂತ ತಿರು ಓಣಂ ಹಬ್ಬದ ಸಡಗರ, ಸಂಭ್ರಮ
4. ಇಂದು ಮಾಜಿ ರಾಷ್ಟ್ರಪತಿ ಸರ್ವಪಲ್ಲಿ ರಾಧಾಕೃಷ್ಣನ್ ಹುಟ್ಟುಹಬ್ಬದ ಹಿನ್ನೆಲೆ; ದೇಶಾದ್ಯಂತ ಶಿಕ್ಷಕರ ದಿನಾಚರಣೆಯ ಆಚರಣೆ

>><><><><><><><><<

ದೇಶದಲ್ಲಿ ಪರಿಶಿಷ್ಟರ ಅಭಿವೃದ್ಧಿಗೆ ಕೇಂದ್ರ ಸರ್ಕಾರ ಬದ್ಧವಾಗಿದೆ ಎಂದು ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಖಾತೆ ರಾಜ್ಯ ಸಚಿವ ರಾಮದಾಸ್ ಅಠಾವಳೆ ತಿಳಿಸಿದ್ದಾರೆ.ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬುಡಕಟ್ಟು ಹಾಗೂ ಪರಿಶಿಷ್ಟ ವರ್ಗದವರು ತಯಾರಿಸಿದ ವಸ್ತುಗಳಿಗೆ ಮಾರುಕಟ್ಟೆ ಒದಗಿಸಲು ಬೆಂಗಳೂರಿನ ಫ್ರೀಡಂಪಾರ್ಕ್‌ನಲ್ಲಿ ಇಂದು ಶಿಲ್ಪೋತ್ಸವ- ೨೦೨೫ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಹೇಳಿದರು.ಶಿಲ್ಪ ಸಮಾಗಮ ಮೇಳ ಬೆಂಗಳೂರಿನಲ್ಲಿ ನಡೆಯುತ್ತಿರುವ ಎರಡನೇ ಮೇಳವಾಗಿದೆ. ರಾಜ್ಯದಲ್ಲಿ ಪರಿಶಿಷ್ಟರ ಹಣ ಗ್ಯಾರಂಟಿ ಯೋಜನೆಗೆ ಬಳಸಲಾಗುತ್ತಿದ್ದು ದುರ್ಬಳಕೆ ಮಾಡದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಲ್ಲಿ ಕೇಂದ್ರ ಸಚಿವರು ಮನವಿ ಮಾಡಿದರು.

>><><><><><><><><<

ಪ್ರವಾದಿ ಹಜ್ರತ್ ಮೊಹಮ್ಮದ್ ಅವರ ಜನ್ಮದಿನವಾದ ಇಂದು ಮಿಲಾದ್ ಉನ್ ನಬಿ ಅನ್ನು ದೇಶದಾದ್ಯಂತ ಮುಸ್ಲಿಂ ಬಾಂಧವರು ಶ್ರದ್ಧಾ ಭಕ್ತಿಯಿಂದ ಆಚರಿಸುತ್ತಿದ್ದಾರೆ. ಹಬ್ಬದ ಅಂಗವಾಗಿ ಮಸೀದಿಗಳನ್ನು ವಿದ್ಯುತ್ ದೀಪಗಳಿಂದ ಶೃಂಗರಿಸಲಾಗಿದ್ದು ಮುಂಜಾನೆಯಿಂದಲ್ಲೆ ವಿಶೇಷ ಪ್ರಾರ್ಥನೆ ಸಲ್ಲಿಸುತ್ತಿದ್ದಾರೆ.ರಾಜ್ಯಾದ್ಯಂತ ವಿವಿಧ ಜಿಲ್ಲೆಗಳಲ್ಲಿ ಮುಸ್ಲಿಂ ಬಾಂಧವರು ಈದ್ ಮಿಲಾದ್ ಹಬ್ಬವನ್ನು ಆಚರಣೆ ಮಾಡುತ್ತಿದ್ದಾರೆ. ಚಿಕ್ಕಮಗಳೂರು ಜಿಲ್ಲೆಯಾದ್ಯಂತ ಮುಸ್ಲಿಂ ಬಾಂದವರು ಈದ್ ಮಿಲಾದ್ ಹಬ್ಬವನ್ನು ಶ್ರದ್ಧಾ ಭಕ್ತಿಯಿಂದ ಆಚರಿಸುತಿದ್ದಾರೆ. ಮುಂಜಾನೆಯಿಂದಲ್ಲೆ ವಿಶೇಷ ಪ್ರಾರ್ಥನೆ ಸಲ್ಲಿಸಲಾಗುತಿದೆ. ಹಲವೆಡೆ ವೃದ್ಧಾಶ್ರಮ ಹಾಗು ಆಸ್ಪತ್ರೆಗಳಲ್ಲಿ ಉಪಹಾರ ಹಣ್ಣು ಹಂಪಲು ವಿತರಣೆ ಮಾಡುತ್ತಿದ್ದಾರೆ. ಮುಸ್ಲಿಂ ಬಾಂಧವರ ಪವಿತ್ರ ಈದ್ ಮಿಲಾದ್ ಅನ್ನು ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಶ್ರದ್ಧಾ ಭಕ್ತಿಯಿಂದ ಆಚರಿಸಲಾಗುತ್ತಿದೆ.ವಿವಿಧ ಮಸೀದಿಗಳಲ್ಲಿ ಮೌಲೀದ್ ಪಾರಾಯಣ ನಡೆಯಿತು. ಮಸೀದಿಗಳು ಹಾಗೂ ರಸ್ತೆಯ ಇಕ್ಕಲೆಗಳಲ್ಲಿ ತೋರಣಗಳು ಹಾಗೂವಿದ್ಯುತ್ ದೀಪಗಳ ಅಲಂಕಾರ ಮಾಡಲಾಗಿದೆ. ಮುಸ್ಲಿಂ ಬಾಂಧವರು ಪರಸ್ಪರ ಈದ್ ಶುಭಾಶಯಗಳನ್ನು ಕೋರುವ ಮೂಲಕ ಸಂಭ್ರಮಿಸುತ್ತಿದ್ದಾರೆ.ಕೋಲಾರ ಜಿಲ್ಲೆಯಾದ್ಯಂತ ಮುಸ್ಲಿಂ ಬಾಂಧವರು ಈದ್ ಮಿಲಾದ್ ಹಬ್ಬವನ್ನು ಶ್ರದ್ಧಾ

ಭಕ್ತಿಯಿಂದ  ಆಚರಿಸುತ್ತಿದ್ದಾರೆ. ನಗರದ ಕ್ಲಾಕ್ ಟವರ್ ಬಳಿ ಮುಸ್ಲಿಂ ಬಾಂಧವರು ಸಾಮೂಹಿಕ ಮೆರವಣಿಗೆ ನಡೆಸಿದರು. ಈ ಸಂದರ್ಭದಲ್ಲಿ ಬಿಗಿ ಪೋಲಿಸ್ ಬಂದೋಬಸ್ತ್  ಮಾಡಲಾಗಿತ್ತು.

>><><><><><><><<

ತುಮಕೂರು ಜಿಲ್ಲಾ ವ್ಯಾಪ್ತಿಯಲ್ಲಿ ಗಣೇಶೋತ್ಸವ ಹಾಗೂ ಈದ್ ಮಿಲಾದ್ ಪೂರ್ಣಗೊಳ್ಳುವವರೆಗೆ ಜಿಲ್ಲಾದ್ಯಂತ ಹೆಚ್ಚಿನ ಶಬ್ದ ಹೊರಸೂಸುವ ಧ್ವನಿವರ್ಧಕಗಳನ್ನು ನಿಷೇಧಗೊಳಿಸಿ ಜಿಲ್ಲಾಧಿಕಾರಿ ಶುಭಾ ಕಲ್ಯಾಣ್ ಆದೇಶ ಹೊರಡಿಸಿದ್ದಾರೆ.ಸಾರ್ವಜನಿಕರಿಗೆ ತೊಂದರೆ ಉಂಟಾಗುವ ಹಿನ್ನೆಲೆಯಲ್ಲಿ ಇದೇ ೨೦ ರವರೆಗೆ ಜಿಲ್ಲೆಯಾದ್ಯಂತ ಈ ಆದೇಶವನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಸೂಚಿಸಿದ್ದಾರೆ.

>><><><><><><><<

ಇಂದು ದೇಶಾದ್ಯಂತ ತಿರು ಓಣಂ ಆಚರಣೆ ಮಾಡಲಾಗುತ್ತಿದೆ. ಕೇರಳದಲ್ಲಿ ವಿಶೇಷವಾಗಿ ಇಂದು ಹಬ್ಬವನ್ನು ದೊಡ್ಡ ಮಟ್ಟದಲ್ಲಿ ಆಚರಣೆ ಮಾಡಲಾಗುತ್ತಿದ್ದು, ಈ ಹಬ್ಬ ೧೧ ದಿನಗಳ ಹಿಂದೆ ಅತ್ತಂ ಹಬ್ಬದೊಂದಿಗೆ ಪ್ರಾರಂಭವಾಗಿತ್ತು. ದಾವಣಗೆರೆಯಲ್ಲಿ ಓಣಂ ಹಬ್ಬವನ್ನು ಆಚರಣೆ ಮಾಡಲಾಗುತಿದ್ದು, ಈ ಹಬ್ಬವನ್ನು ಆಚರಿಸುವ ಜನರು ಮನೆಗಳ ಮುಂದೆ ವಿವಿಧ ಬಗೆಯ ಹೂಗಳಿಂದ ರಂಗೋಲಿ ಬಿಡಿಸಿ, ದೀಪಗಳನ್ನು ಹಚ್ಚಿ ಸಂಭ್ರಮದಿಂದ ಹಬ್ಬವನ್ನು ಆಚರಣೆ ಮಾಡುತ್ತಿದ್ದಾರೆ.

>><><><><><><><<

ಇಂದು ಮಾಜಿ ರಾಷ್ಟ್ರಪತಿ ಸರ್ವಪಲ್ಲಿ ರಾಧಾಕೃಷ್ಣನ್ ಅವರ ಹುಟ್ಟುಹಬ್ಬದ ಹಿನ್ನೆಲೆಯಲ್ಲಿ ದೇಶಾದ್ಯಂತ ಶಿಕ್ಷಕರ ದಿನಾಚರಣೆಯನ್ನು ಆಚರಿಸಲಾಗುತ್ತಿದೆ.ಶೈಕ್ಷಣಿಕ ಕ್ಷೇತ್ರದಲ್ಲಿ ಅತ್ಯುತ್ತಮ ಸಾಧನೆ ಮಾಡಿರುವ ಸಂಸ್ಥೆ ಮತ್ತು ಶಿಕ್ಷಕರ ಶ್ರೇಷ್ಠತೆಯನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಈ ಪ್ರಶಸ್ತಿಯು ಪ್ರೇರಣೆಯ ಸಂಕೇತವಾಗಿದೆ.ರಾಜ್ಯಾದ್ಯಂತ ವಿವಿಧ ಜಿಲ್ಲೆಗಳಲ್ಲೂ ಕೂಡ ಇಂದು ಶಿಕ್ಷಕರ ದಿನಾಚರಣೆಯನ್ನು ಆಚರಣೆ ಮಾಡಲಾಯಿತು. ಶಿಕ್ಷಣ ನೀಡಿ, ವಿದ್ಯಾರ್ಥಿಗಳನ್ನು ಉತ್ತಮ ನಾಗರಿಕರನ್ನಾಗಿ ನಿರ್ಮಾಣ ಮಾಡುವಲ್ಲಿ ಶ್ರಮಿಸಿದ ಶಿಕ್ಷಕರ ಪಾತ್ರ ಪ್ರತಿಯೊಬ್ಬರ ಜೀವನದಲ್ಲಿ ಅತಿ ಮೌಲ್ಯಯುತವಾದುದು ಎಂದು ದಾವಣಗೆರೆ ಲೋಕಸಭಾ ಸದಸ್ಯೆ ಡಾ.ಪ್ರಭಾ ಮಲ್ಲಿಕಾರ್ಜುನ ಹೇಳಿದ್ದಾರೆ.ಜಿಲ್ಲೆಯಲ್ಲಿಂದು ಹಮ್ಮಿಕೊಂಡಿದ್ದ ಶಿಕ್ಷಕರ ದಿನಾಚರಣೆಯಲ್ಲಿ ಜಿಲ್ಲಾ ಮಟ್ಟದ ಪ್ರಶಸ್ತಿ ಪುರಸ್ಕೃತ ಶಿಕ್ಷಕರನ್ನು ಸನ್ಮಾನಿಸಿ ಅವರು ಮಾತನಾಡಿದರು.ಇಂದಿನ ಸ್ಪರ್ಧಾತ್ಮಕ ಜಗತ್ತಿಗೆ ವಿದ್ಯಾರ್ಥಿಗಳನ್ನು ಸಿದ್ಧಪಡಿಸುವ ದೊಡ್ಡ ಜವಾಬ್ದಾರಿ ಶಿಕ್ಷಕರ ಮೇಲಿದ್ದು, ಇದನ್ನು ಶಿಕ್ಷಕರು ಸಮರ್ಥವಾಗಿ ನಿಭಾಯಿಸಬೇಕಿದೆ ಎಂದು ಸಲಹೆ ನೀಡಿದರು.

>><><><><><><><<

ವಿಜಯಪುರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಇವರ ಸಹಯೋಗದಲ್ಲಿ  ನಗರದ ಕಂದಗಲ್  ಹನುಮಂತರಾಯ ರಂಗಮಂದಿರದಲ್ಲಿ ಡಾ.ಸರ್ವಪಲ್ಲಿ ರಾಧಾಕೃಷ್ಣನ್ ಜನ್ಮ ದಿನದ ಅಂಗವಾಗಿ ಶಿಕ್ಷಕರ ದಿನಾಚರಣೆಯ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಸಂಸದ ರಮೇಶ ಜಿಗಜಿಣಗಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಶಿಕ್ಷಕ ವೃತ್ತಿ ಅನ್ನುವುದು ನೋಬೆಲ್ ವೃತ್ತಿಯಾಗಿದ್ದು, ಶಿಕ್ಷಕರಿಗೆ ಸಮಾಜದಲ್ಲಿ ವಿಶೇಷ ಗೌರವ, ಶ್ರೇಷ್ಠ ಸ್ಥಾನವಿದೆ. ಎಲ್ಲ ವೃತ್ತಿಗಳನ್ನು ಕಲಿಸುವ ಮೂಲ ವೃತ್ತಿ ಶಿಕ್ಷಕ ವೃತ್ತಿಯಾಗಿದೆ ಎಂದು ಹೇಳಿದರು.

>><><><><><><><<

೨೦೨೫-೨೬ನೇ ಸಾಲಿನಲ್ಲಿ ಮಾಜಿ ಶಿಕ್ಷಣ ಸಚಿವರಾದ ದಿವಂಗತ ಎಚ್.ಜಿ. ಗೋವಿಂದೇಗೌಡ ಅವರ ಹೆಸರಿನಲ್ಲಿ ಬೆಂಗಳೂರು ವಿಭಾಗದಲ್ಲಿ ಒಂದು ಅತ್ಯುತ್ತಮ ಸರ್ಕಾರಿ ಕನ್ನಡ ಮಾಧ್ಯಮಿಕ ಹಿರಿಯ ಪ್ರಾಥಮಿಕ ಶಾಲೆ ಪ್ರಶಸ್ತಿಗೆ ಪಿಎಂಶ್ರೀ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆ, ವೀರ ರಾಘವನ ಪಾಳ್ಯ, ನೆಲಮಂಗಲ ತಾಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಹಾಗೂ  ಒಂದು ಅತ್ಯುತ್ತಮ ಸರ್ಕಾರಿ ಕನ್ನಡ ಪ್ರೌಢಶಾಲೆಗೆ ಪ್ರಶಸ್ತಿಗೆ ಸರ್ಕಾರಿ ಪದವಿ ಪೂರ್ವ ಕಾಲೇಜು, ಹೊಸದುರ್ಗ ತಾಲೂಕು ಚಿತ್ರದುರ್ಗ ಜಿಲ್ಲೆಗೆ ಪ್ರಶಸ್ತಿಗೆ ಭಾಜನವಾಗಿವೆ.ಪ್ರಶಸ್ತಿ ಮೊತ್ತವು ಸರ್ಕಾರದಿಂದ ಎರಡೂವರೆ ಲಕ್ಷ ರೂಪಾಯಿಗಳಾಗಿದ್ದು, ಗೋವಿಂದೇಗೌಡ ಅವರು ಠೇವಣಿ ಮಾಡಿರುವ ಬಡ್ಡಿ ಮೊತ್ತವು ೨೫ ಸಾವಿರ ರೂಪಾಯಿಗಳಾಗಿದ್ದು, ಈ ಮೊತ್ತವನ್ನು ಶಾಲೆಯ ಶೈಕ್ಷಣಿಕ ಚಟುವಟಿಕೆ ಮತ್ತು ಮೂಲಭೂತಸೌಕರ್ಯಗಳಿಗೆ ಬಳಸಬಹುದಾಗಿದೆ. ಶಾಲೆಯ ಮುಂದೆ ಮಲೆನಾಡ ಗಾಂಧಿ ದಿವಂಗತ ಎಚ್.ಜಿ. ಗೋವಿಂದೇಗೌಡ ಪ್ರಶಸ್ತಿ ಪುರಸ್ಕೃತ ಶಾಲೆ ಎಂಬ ನಾಮಫಲಕ ಹಾಕುವಂತೆ ರಾಜ್ಯ ಸರ್ಕಾರದ ಶಾಲಾ ಶಿಕ್ಷಣ ಇಲಾಖೆ ಸೂಚಿಸಿದೆ.

>><><><><><><><<

೨೦೨೫-೨೬ನೇ ಶೈಕ್ಷಣಿಕ ಸಾಲಿಗೆ ಆಯ್ಕೆಯಾದ ಇಬ್ಬರು ಪ್ರಾಂಶುಪಾಲರು ಮತ್ತು ಎಂಟು ಉಪನ್ಯಾಸಕರ ಹೆಸರನ್ನು ರಾಜ್ಯ ಸರ್ಕಾರದ ಶಾಲಾ ಶಿಕ್ಷಣ ಇಲಾಖೆ ಪ್ರಕಟಿಸಿದೆ. ಅತ್ಯುತ್ತಮ ಪ್ರಾಂಶುಪಾಲರ ಪ್ರಶಸ್ತಿಗೆ ಬೆಳಗಾವಿಯ ಚಿಕ್ಕೋಡಿ ತಾಲೂಕಿನ ಮಜಲಟ್ಟಿಯ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಆನಂದ ಶಿವಪ್ಪ ಕೋಳಿ ಹಾಗೂ ಮೈಸೂರು ಜಿಲ್ಲೆಯ ಕೃಷ್ಣರಾಜನಗರದ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನ ಕೃಷ್ಣಯ್ಯ ಕೆ.ಎಚ್. ಆಯ್ಕೆಯಾಗಿದ್ದಾರೆ. ರಾಜ್ಯ ಮಟ್ಟದ ಉತ್ತಮ ಉಪನ್ಯಾಸಕರ ಪ್ರಶಸ್ತಿಗೆ ಬೆಂಗಳೂರಿನ ಜೀವಶಾಸ್ತ್ರ ಉಪನ್ಯಾಸಕರಾದ ದೇವರಾಜು ಆರ್., ಶಿವಮೊಗ್ಗ ಜಿಲ್ಲೆಯ ಕನ್ನಡ ಉಪನ್ಯಾಸಕರಾದ ಡಾ. ಸಫ್ರರಾಜ ಜಿ., ಬಾಗಲಕೋಟೆಯ ಜೀವಶಾಸ್ತ್ರ ಉಪನ್ಯಾಸಕರಾದ ಡಾ. ಲಿಂಗಾನಂದ ಕೆ. ಗವಿಮಠ್, ಬೆಳಗಾವಿಯ ಕನ್ನಡ ಉಪನ್ಯಾಸಕರಾದ ಜ್ಯೋತಿ ಸಿ.ಎಂ., ವಿಜಯಪುರ ಜಿಲ್ಲೆಯ ಸಮಾಜಶಾಸ್ತ್ರ ಉಪನ್ಯಾಸಕರಾದ ಬಸವರಾಜ ಎಸ್. ಜಲವಾಡಿ, ತುಮಕೂರಿನ ರಸಾಯನಶಾಸ್ತ್ರ ಉಪನ್ಯಾಸಕರಾದ ಡಾ. ಲೋಕೇಶ್ ಕೆ. ಬಾಗಲಕೋಟೆಯ ರಾಜ್ಯಶಾಸ್ತ್ರ ಉಪನ್ಯಾಸಕರಾದ ವಿಜಯಲಕ್ಷ್ಮಿ ಪಂಡಪ್ಪ ಪೆಟ್ಲೂರು ಹಾಗು ತುಮಕೂರಿನ ಭೌತಶಾಸ್ತ್ರ ಉಪನ್ಯಾಸಕರಾದ ವೆಂಕಟಾಚಲ ಸಿ.ವಿ. ಆಯ್ಕೆಯಾಗಿದ್ದಾರೆ.

>><><><><><><><<

ಕೇಂದ್ರ ಸರ್ಕಾರ ಜಿಎಸ್‌ಟಿ ಇಳಿಕೆ ಮಾಡಿರುವುದು ಐತಿಹಾಸಿಕ ಘೋಷಣೆ. ಇದರಿಂದ ದೇಶದ ಬಡ ಮತ್ತು ಮಧ್ಯಮ ವರ್ಗದ ಹೊರೆ ಕಡಿಮೆ ಆಗಲಿದೆ ಎಂದು ದಕ್ಷಿಣ ಕನ್ನಡ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ಹೇಳಿದರು.ಮಂಗಳೂರಿನಲ್ಲಿ ಮಾತನಾಡಿದ ಅವರು, ಜಿಎಸ್‌ಟಿ ಇಳಿಕೆಯಿಂದ ದೇಶದ ಆರ್ಥಿಕತೆ ಮತ್ತು ಕೈಗಾರಿಕೆಗಳಿಗೆ ದೊಡ್ಡ ಮಟ್ಟದ ಉತ್ತೇಜನ ಸಿಗಲಿದೆ. ಆರೋಗ್ಯ ಕ್ಷೇತ್ರಕ್ಕೆ ಹೆಚ್ಚಿನ ಲಾಭ ಸಿಗಲಿದೆ. ೩೩ ಜೀವರಕ್ಷಕ ಔಷಧಗಳಿಗೆ ಜಿಎಸ್‌ಟಿಯಿಂದ ವಿನಾಯಿತಿ ನೀಡಲಾಗಿದೆ. ಆರೋಗ್ಯ ಮತ್ತು ಜೀವ ವಿಮೆಗೂ ಶೂನ್ಯ ಜಿಎಸ್‌ಟಿ ಅನ್ವಯವಾಗಲಿದೆ. ಜಿಎಸ್‌ಟಿ ಇಳಿಕೆಯ ಈ ತೀರ್ಮಾನದಿಂದ ದೇಶದಲ್ಲಿ ಬಹುದೊಡ್ಡ ಧನಾತ್ಮಕ ಬದಲಾವಣೆ ಆಗಲಿದೆ ಎಂದರು.

>><><><><><><><<

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಡಿ ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮದ ವತಿಯಿಂದ ೨೦೨೬ ನೇ ಸಾಲಿನಲ್ಲಿ ಚೀನಾದ ಶಾಂಘೈನಲ್ಲಿ ನಡೆಯುವ ವಿಶ್ವ ಕೌಶಲ್ಯ ಸ್ಪರ್ಧೆಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ನಿಟ್ಟಿನಲ್ಲಿ ಕರ್ನಾಟಕ ರಾಜ್ಯ ಕೌಶಲ್ಯ ಒಲಿಂಪಿಕ್ಸ್ ಸ್ಪರ್ಧಾ ಕಾರ್ಯಕ್ರಮವನ್ನು ೬೩ ಪ್ರಕಾರದ ಕೌಶಲ್ಯ

ವಿಭಾಗಗಳಲ್ಲಿ ಆಯೋಜಿಸುತ್ತಿದೆ.ಆಸಕ್ತ ಅರ್ಹ ಅಭ್ಯರ್ಥಿಗಳು www.skillindiadigital.gov.in/home ವೆಬ್‌ಸೈಟ್‌ನಲ್ಲಿ ಉಚಿತವಾಗಿ ನೋಂದಾವಣೆ ಮಾಡಬಹುದು. ಸ್ಪರ್ಧೆಗೆ ನೋಂದಾಯಿಸಿಕೊಳ್ಳಲು ಸೆಪ್ಟೆಂಬರ್ ೨೦ ಕೊನೆಯ ದಿನ. ಹೆಚ್ಚಿನ ಮಾಹಿತಿಗೆ ದೂರವಾಣಿ ಸಂಖ್ಯೆ ೯೬೦೬೪೯೨೨೧೬ ಸಂಪರ್ಕಿಸಬಹುದು ಎಂದು ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳು ತಿಳಿಸಿದ್ದಾರೆ.

>><><><><><><><<

ಕಾರವಾರದಲ್ಲಿ ಭಾರತೀಯ ಸೇನೆ ಮತ್ತು ಇತರೆ ಸೇವೆಗಳಿಗೆ ಸೇರ ಬಯಸುವ ರಾಜ್ಯದ ಹಿಂದುಳಿದ ವರ್ಗಗಳ ಅರ್ಹ ಅಭ್ಯರ್ಥಿಗಳಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು ೨೦೧೫-೧೬ನೇ ಸಾಲಿನಲ್ಲಿ ಆಯ್ಕೆಯ ಪೂರ್ವ ಸಿದ್ಧತೆ ಬಗ್ಗೆ ವೃತ್ತಿ ಮಾರ್ಗದರ್ಶನ ಹಾಗೂ ತರಬೇತಿಯನ್ನು ಉಚಿತವಾಗಿ ನೀಡುತ್ತಿದ್ದು, ತರಬೇತಿಗಾಗಿ ಅರ್ಹ ಯುವಕರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.ತರಬೇತಿಯು ಕಾರವಾರ ತಾಲೂಕಿನ ಮಾಜಾಳಿ ವೀರ ಬಹದ್ದೂರ ಹೆಂಜಾ ನಾಯ್ಕ ಸೇನಾ ಆಯ್ಕೆ ಪೂರ್ವ ತರಬೇತಿ ಶಾಲೆಯಲ್ಲಿ ಮಾತ್ರ ನೀಡಲಾಗುವುದು. ಅಭ್ಯರ್ಥಿಗಳು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಗೆ ಅರ್ಜಿಯನ್ನು ಖುದ್ದಾಗಿ ಅಥವಾ ನೋಂದಾಯಿತ ಅಂಚೆ ಮೂಲಕ ಅಕ್ಟೋಬರ್ ೨ ರೊಳಗಾಗಿ ಅರ್ಜಿ ಸಲ್ಲಿಸಬಹುದು.ಅರ್ಜಿ ನಮೂನೆಯನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಪಡೆದು ಭರ್ತಿ ಮಾಡಿ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಕಚೇರಿಗೆ ಅರ್ಜಿಯನ್ನು ಖುದ್ದಾಗಿ ಅಥವಾ ನೊಂದಾಯಿತ ಅಂಚೆಯ ಮೂಲಕ ಸಲ್ಲಿಸ ಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ :೦೮೩೮೨-೨೨೬೫೮೮ನ್ನು ಸಂಪರ್ಕಿಸುವಂತೆ ಉತ್ತರಕನ್ನಡ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ತಿಳಿಸಿದ್ದಾರೆ.

>><><><><><><><<

ಕಲಬುರಗಿ ನಗರದ ವಾಣಿಸಾಮ್ರಾಟ ಮತ್ತು ವೃತ್ತಮಂಜರಿ ಪತ್ರಿಕೆಗಳ ಸಂಪಾದಕ ಗೋವಿಂದರಾವ ಖಮಿತಕರ್ ಇಂದು ಬೆಳಿಗ್ಗೆ ನಿಧನ ಹೊಂದಿದ್ದಾರೆ.ಕಳೆದ ನಾಲ್ಕು ದಶಕಗಳಿಗೂ ಹೆಚ್ಚು ಕಾಲ ಪತ್ರಿಕೋದ್ಯಮದಲ್ಲಿ ತಮ್ಮದೇ ರೀತಿಯಲ್ಲಿ ಸೇವೆ ಸಲ್ಲಿಸಿದ ಹಿರಿಯ ಪತ್ರಕರ್ತರಾಗಿದ್ದರು.ಹೈದ್ರಾಬಾದ್ ಕರ್ನಾಟಕ ಪ್ರದೇಶದಲ್ಲಿ ಏಕೈಕ ಹಿಂದಿ ಪತ್ರಿಕೆಯನ್ನು ಆರಂಭಿಸಿ ನೀರಾವರಿ, ಶೈಕ್ಷಣಿಕ ಸೇರಿದಂತೆ ಸರ್ವಾಂಗೀಣ ಅಭಿವೃದ್ಧಿಗೆ ಪೂರಕವಾದ ಲೇಖನ ಬರೆಯುವ ಮೂಲಕ ಅವರು ಶ್ರಮಿಸಿದ್ದರು.

>><><><<><><><><<